RNU AIR DHARWAD

# MARCH 26,2025
# ALL INDIA RADIO- DHARWAD
# PRADESH SAMACHARA (KANNADA) 12PM

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವವರು: ವಿವೇಕಾದಿತ್ಯ ಕನಿಯಾಲ**

<><><>

**ಮೇಕೆದಾಟು ಯೋಜನೆಯ ಕರಡು ಪೂರ್ವ ಸಾಧ್ಯತಾ** ವರದಿ ಸಲ್ಲಿಕೆಯಾಗಿದ್ದು, ರಾಜ್ಯ ಸರ್ಕಾರವು ಯೋಜನೆಯ ಅನುಷ್ಠಾನಕ್ಕೆ ಬದ್ಧವಾಗಿದೆ. ಪ್ರಸ್ತುತ ನ್ಯಾಯಾಲಯದ ಮೂಲಕ ನ್ಯಾಯ ಸಿಗುವ ವಿಶ್ವಾಸವಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಹೇಳಿದರು. ಬೆಂಗಳೂರು, ಸರ್ಕಾರಿ ಗೃಹ ಕಚೇರಿಯಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಮೇಕೆದಾಟು ಯೋಜನೆಯ ಬಗ್ಗೆ ಕೇಂದ್ರ ಸರ್ಕಾರಕ್ಕೂ ಪ್ರಸ್ತಾವ ಸಲ್ಲಿಸಲಾಗಿದೆ ಎಂದರು.

<><><>

**ಧಾರವಾಡದ ಡಾಕ್ಟರ್ ಅಣ್ಣಾಜಿ** ರಾವ್ ಸಿರೂರ, ಸೃಜನಾ ರಂಗಮಂದಿರದಲ್ಲಿ, ಇಂದು ಸಂಜೆ 6 ಗಂಟೆ 30 ನಿಮಿಷಕ್ಕೆ, ಹಿರಿಯ ರಂಗಕರ್ಮಿ ಎಸ್.ಎನ್ ಸೇತುರಾಂ ನಿರ್ದೇಶನದ "ತಳಿ" ನಾಟಕ ಪ್ರದರ್ಶನ ಗೊಳ್ಳಲಿದೆ. ಸ್ನೇಹ ಪ್ರತಿಷ್ಠಾನ ಹಾಗೂ ಜಿ.ಬಿ ಜೋಶಿ ಮೆಮೋರಿಯಲ್ ಟ್ರಸ್ಟ್ ಆಯೋಜಿಸುತ್ತಿರುವ ನಾಟಕದ ಕುರಿತು ಪ್ರದೇಶ ಸಮಾಚಾರಕ್ಕಾಗಿ ಹೆಚ್ಚಿನ ಮಾಹಿತಿ ನೀಡಿದ್ದಾರೆ ಆಯೋಜಕರಾದ ಧಾರವಾಡದ ಹರ್ಷ ಡಂಬಳ ಅವರು..

<><><>

**ಬೈಟ್: ಹರ್ಷ ಡಂಬಳ 37ಸೆಕೆಂದುಗಳು**

<><><>

ಎಂದು ಧಾರವಾಡ ತಾಲೂಕು ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷ ಡಾಕ್ಟರ್ ನಿತಿನ್ ಚಂದ್ರ ಹತ್ತೀಕಾಳ ಹೇಳಿದರು. ನಗರದ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಜರುಗಿದ 11 ನೇ ಕನ್ನಡ ಸಾಹಿತ್ಯ ಸಮ್ಮೇಳನದ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿದರು. ಕನ್ನಡ ಶಾಲೆಗಳನ್ನು ಬಲಗೊಳಿಸಿ, ಅವುಗಳನ್ನು ಆದರ್ಶವಾಗಿಸಿದರೆ, ಮಕ್ಕಳು ಸ್ಥಳೀಯ ಭಾಷೆಯಲ್ಲೇ ಕಲಿತು, ಜಾಗತಿಕ ಸ್ಪರ್ಧೆಗೆ ಅಣಿಯಾಗುತ್ತಾರೆ ಎಂದರು. ಸಮ್ಮೇಳನದ ಮೂಲಕ ಪ್ರತಿ ತಾಲೂಕಿನಲ್ಲಿ ಕನ್ನಡ ಭವನ ನಿರ್ಮಿಸಲು ಸರ್ಕಾರ ಕ್ರಮ ಕೈಗೊಳ್ಳಬೇಕು ಎಂಬ ನಿರ್ಣಯ ಕೈಗೊಳ್ಳಲಾಯಿತು.

<><><>

**ಹುಬ್ಬಳ್ಳಿಯ ಕೆ.ಎಲ್.ಇ ಟೆಕ್ ಸಂಸ್ಥೆ** ಹಾಗೂ ಭಾರತ ಸರ್ಕಾರ ಅಧೀನದ ಜವಾಹರಲಾಲ್ ನೆಹರೂ ಸೆಂಟರ್ ಫಾರ್ ಅಡ್ವಾನ್ಸ್‌ಡ ಸೈಂಟಿಫಿಕ್ ರಿಸರ್ಚ್ ಸಂಸ್ಥೆಗಳು ಪರಸ್ಪರ ಸಂಶೋಧನ ಸಾಮರ್ಥ್ಯವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಹಾಗೂ ಶೈಕ್ಷಣಿಕ ಸಂಶೋಧನಾ ಕ್ಷೇತ್ರದಲ್ಲಿನ ಸಹಯೋಗವನ್ನು ಬಲಪಡಿಸುವ ನಿಟ್ಟಿನಲ್ಲಿ ಒಪ್ಪಂದ ಪತ್ರಕ್ಕೆ ಸಹಿ ಹಾಕಿದವು.

<><><>

**ಅಂತರ್ಜಲ ಹೆಚ್ಚಳದ ಮೂಲಕ ರೈತರಿಗೆ** ಅನುಕೂಲವಾಗುವ ನಿಟ್ಟಿನಲ್ಲಿ ಬೀದರ ಜಿಲ್ಲೆಯಾದ್ಯಂತ ಸಾವಿರ ಕೃಷಿ ಹೊಂಡಗಳನ್ನು ನಿರ್ಮಿಸುವಂತೆ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಖಾತೆ ಸಚಿವ ಈಶ್ವರ ಬಿ.ಖಂಡ್ರೆ ಹೇಳಿದರು. ಬೀದರ ಜಿಲ್ಲಾಧಿಕಾರಿ ಸಭಾಂಗಣದಲ್ಲಿ ಜರುಗಿದ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸರಕಾರದ ಅನುದಾನವನ್ನು ಬಳಸಿ ಜಿಲ್ಲೆಯಾದ್ಯಂತ ಪ್ರತಿವರ್ಷ ಒಂದು ಸಾವಿರ ಕೃಷಿ ಹೊಂಡಗಳನ್ನು ನಿರ್ಮಿಸುವಂತೆ ಕೃಷಿ ಇಲಾಖೆ ಜಂಟಿ ನಿರ್ದೇಶಕರಾದ ಜಿಯಾವುಲ್ಲಾ ಅವರಿಗೆ ಸೂಚಿಸಿದರು. ಪ್ರಸಕ್ತ ವರ್ಷದಲ್ಲಿ, ಈ ತನಕ 334 ಕೃಷಿ ಹೊಂಡಗಳನ್ನು ನಿರ್ಮಿಸಲಾಗಿದೆ ಎಂದು ಅಧಿಕಾರಿಗಳು ಸಚಿವರ ಗಮನಕ್ಕೆ ತಂದರು.

<><><>

**ಚಾಮರಾಜನಗರ,** ಹಿಮವದ್ ಗೋಪಾಲಸ್ವಾಮಿ ಬೆಟ್ಟದಲ್ಲಿ ವಾರ್ಷಿಕ ಬ್ರಹ್ಮರಥೋತ್ಸವ ಹಾಗೂ ಜಾತ್ರಾ ಮಹೋತ್ಸವವು ವಿಜ್ರಂಭಣೆಯಿಂದ ಜರುಗಿತು. ಕರ್ನಾಟಕ ಸೇರಿದಂತೆ ನೆರೆಯ ಕೇರಳ, ತಮಿಳುನಾಡಿನಿಂದ ಆಗಮಿಸಿದ ಭಕ್ತರು ರಥೋತ್ಸವದ ಸಂಭ್ರಮದಲ್ಲಿ ಪಾಲ್ಗೊಂಡರು.

<><><>

**ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ** ಸಮುದಾಯದ 3 ಸಾವಿರದ 351 ವಿದ್ಯಾರ್ಥಿಗಳಿಗೆ 5 ಕೋಟಿ 16 ಲಕ್ಷ ರೂಪಾಯಿ ವೆಚ್ಚದ ವಿದ್ಯಾರ್ಥಿ ವೇತನ ಬಿಡುಗಡೆಗೊಳಿಸಿ, ನೇರ ನಗದು ವರ್ಗಾವಣೆ ಮೂಲಕ ಫಲಾನುಭವಿಗಳ ಖಾತೆಗೆ ಪಾವತಿಸಲಾಗಿದೆ ಎಂದು ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಅಸಗೋಡು ಜಯಸಿಂಹ ತಿಳಿಸಿದ್ದಾರೆ.

<><><>

**ಹಸಿರು ಕ್ರಾಂತಿಯ ಹರಿಕಾರ ಮಾಜಿ** ಉಪ ಪ್ರಧಾನಿ ಡಾಕ್ಟರ ಬಾಬು ಜಗಜೀವನರಾಂ ಹಾಗೂ ಸಂವಿಧಾನ ಶಿಲ್ಪಿ ಡಾಕ್ಟರ ಬಿ.ಆರ್.ಅಂಬೇಡ್ಕರ್ ಅವರ ಜಯಂತ್ಯೋತ್ಸವನ್ನು, ಕಲಬುರಗಿ ಜಿಲ್ಲೆಯ ಎಲ್ಲ ತಾಲೂಕು ಕೇಂದ್ರಗಳಲ್ಲಿ ಕ್ರಮವಾಗಿ, ಏಪ್ರಿಲ್ 5 ಮತ್ತು 14ರಂದು ಅರ್ಥಪೂರ್ಣವಾಗಿ ಆಚರಿಸುವಂತೆ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

<><><>

**ತಾಂತ್ರಿಕ ದೋಷದ ಪರಿಣಾಮ** ಮಂಡ್ಯ ಜಿಲ್ಲೆ ಕೆ.ಆರ್.ಎಸ್ ಅಣೆಕಟ್ಟೆಯ, ಗೇಟ್ ಸಂಖ್ಯೆ 5ರಿಂದ, ಸುಮಾರು ಮೂರರಿಂದ ಐದು ಸಾವಿರ ಕ್ಯೂಸೆಕ್ ನೀರು ಕಾವೇರಿ ನದಿಗೆ ಹರಿದು ತಮಿಳುನಾಡು ಸೇರಿದೆ. ಇದೀಗ ತಾಂತ್ರಿಕ ತೊಂದರೆಯನ್ನು ಸರಿಪಡಿಸಿ ಗೇಟ್ ಬಂದ್ ಮಾಡಿರುವುದಾಗಿ ನೀರಾವರಿ ಇಲಾಖೆಯ ಅಧಿಕಾರಿಗಳು ತಿಳಿಸಿದ್ದಾರೆ. ಕಳೆದ ವರ್ಷ ಜೂನ್‌ನಲ್ಲಿ ಕಾವೇರಿ ಜಲಾನಯನ ಪ್ರದೇಶದಲ್ಲಿ ವ್ಯಾಪಕ ಮಳೆಯಾದ ಹಿನ್ನೆಲೆ, ಕೆಆರ್‌ಎಸ್ ಅಣೆಕಟ್ಟೆ ಸಂಪೂರ್ಣ ಭರ್ತಿಯಾಗಿತ್ತು. ಜಲಾಶಯದಲ್ಲಿ ಇದೀಗ 106 ದಶಾಂಶ 4, 8 ಅಡಿ ನೀರು ಸಂಗ್ರಹವಾಗಿದೆ.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.**

<><><>